ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1993 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಚಿವಾಲಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 22,09,37,000ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 41 ಸಾಮಾನ್ಯ ಆಡಳಿತ ಇತ್ಯಾದಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1993 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಾಮಾನ್ಯ ಆಡಳಿತ ಇತ್ಯಾದಿ ಅಭಿಯಾಚನೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 21,44,28,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 16,62,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 42 ಯೋಜನಾ ಇಲಾಖೆಯ ಅಭಿಯಾಚನೆಗಳು ಇತ್ಯಾದಿ.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1993 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಯೋಜನಾ ಇಲಾಖೆಯ ಅಭಿಯಾಚನೆಗಳು ಇತ್ಯಾದಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 123,42,19,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 28,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 19 ಸಣ್ಣ ಉಳಿತಾಯಗಳು ರಾಜ್ಯ ಲಾಟರಿ ಮತ್ತು ವಿಮೆಗಳಿಗೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1993 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಣ್ಣ ಉಳಿತಾಯ ರಾಜ್ಯ ಲಾಟರಿ ಮತ್ತು ವಿಮೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 30,78,81,000ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು.

ಶಾಸನ ರಚನಾ ಕಾರ್ಯಕಲಾಪಗಳು--

ವಿಧೇಯಕಗಳ ಮಂಡನೆ.

1. 1992ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ:2) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಸ್.ಬಂಗಾರಪ್ಪ (ಮುಖ್ಯಮಂತ್ರಿಯವರು):-ಮಾನ್ಯ ಉಪಾಧ್ಯಕ್ಷರೇ, 1992ರ ಕಾರ್ನಾಟಕ ಧನ ವಿನಿಯೋಗ (ಸಂಖ್ಯೆ:2)ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷಿಣಿಯವರು:- ಪ್ರಸ್ತಾವ ಏನೆಂದರೆ "1992ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ:2) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್.ಬಂಗಾರಪ್ಪ: (ಮುಖ್ಯಮಂತ್ರಿಯವರು):-ಮಾನ್ಯ ಉಪಾಧ್ಯಕ್ಷರೆ, 1992ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ:2)ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಿಣಿಯವರು: * ಅನುಬಂಧಗಳು ವಿಧೇಯಕವನ್ನು ಮಂಡಿಸಲಾಗಿದೆ

2. 1992ರ ಕರ್ನಾಟಕ ಮಾರಾಟ ತೆರಿಗೆ(ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಸ್. ಬಂಗಾರಪ್ಪ: (ಮುಖ್ಯಮಂತ್ರಿಗಳು):- ಮಾನ್ಯ ಉಪಾಧ್ಯಕ್ಷಿಣಿಯವರೆ 1992ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ)ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.